ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 7-11-2016

## ಪತ್ರಿಕಾ ಆಮಂತ್ರಣ

1. **Bengaluru ITE. biz 2016**
   **Curtain Raiser function:**
   **Priyanka Kharge, Minister of IT, BT and Tourism, Govt. of Karnataka.**
   **Date 8-11-2016 Tuesday, Time : 5-00 PM.**
   **Place: Hotel Lalit Ashok, Bengaluru,**

2. ಕರ್ನಾಟಕ ರಾಜ್ಯ ಸರ್ಕಾರದ ಉಪಶಾಮಕ ಆರೈಕೆ ನೀತಿಯ ಕಾರ್ಯಸೂಚಿ ಪ್ರಾರಂಭೋತ್ಸವ ಸಮಾರಂಭ.
   ಮುಖ್ಯ ಅತಿಥಿ:
   ಕೆ.ಆರ್. ರಮೇಶ್ ಕುಮಾರ್, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.
   ಡಾ. ರಾಬರ್ಟ್ ಟ್ವಿಕ್ರಾಸ್ , ಆಕ್ಸ್‌ಫೋರ್ಡ್ ವಿಶ್ವವಿದ್ಯಾಲಯ, ಯು.ಕೆ.
   ಆರೈಕೆ ವಾರ್ತಾ ಪತ್ರಿಕೆ ಬಿಡುಗಡೆ:
   ಡಾ. ಶರಣಪ್ರಕಾಶ್ ಆರ್. ಪಾಟೀಲ್, ವೈದ್ಯಕೀಯ ಶಿಕ್ಷಣ ಸಚಿವರು.
   ದಿನಾಂಕ: 8–11–2016 ಮಂಗಳವಾರ ಸಮಯ: ಸಂಜೆ 7–00 ಗಂಟೆಗೆ
   ಸ್ಥಳ : ಲಾ ಮೆರಿಡಿಯನ್ ಹೋಟೆಲ್, ದಿ. ಡೊಮಿನಿಯನ್ ಸಭಾಂಗಣ, ಬೆಂಗಳೂರು.

## ಪತ್ರಿಕಾ ಪ್ರಕಟಣೆ

# ನಗರದಲ್ಲಿ ನವೆಂಬರ್ 14 ಮತ್ತು 15 ರಂದು

# ಮಹಿಳಾ ಉದ್ದಿಮೆದಾರರ ಸಮಾವೇಶ – ಆರ್.ವಿ. ದೇಶಪಾಂಡೆ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ರಾಜ್ಯದಲ್ಲಿ ಮಹಿಳಾ ಉದ್ದಿಮೆದಾರರಿಗೆ ಆರ್ಥಿಕ ಸಬಲೀಕರಣ ಕಲ್ಪಿಸುವ ಸಂಬಂಧ ಬೆಂಗಳೂರಿನಲ್ಲಿ ಇದೇ ತಿಂಗಳ 14 ಮತ್ತು 15 ರಂದು ಎರಡು ದಿನಗಳ ಕಾಲ ಮಹಿಳಾ ಉದ್ದಿಮೆದಾರರ ಸಮಾವೇಶವನ್ನು ಆಯೋಜಿಸಲಾಗಿದೆ ಎಂದು ಕೈಗಾರಿಕಾ ಸಚಿವ ಆರ್.ವಿ. ದೇಶಪಾಂಡೆ ಅವರು ತಿಳಿಸಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಇಂದು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಏಷ್ಯಾದಲ್ಲೇ ಮೊದಲ ಬಾರಿಗೆ ಈ ಮಹಿಳಾ ಸಮಾವೇಶವನ್ನು ಏರ್ಪಡಿಸಲಾಗಿದ್ದು, ಈ ಸಮಾವೇಶಕ್ಕೆ ಥಿಂಕ್ ಬಿಗ್ – 2016 ಎಂದು ಹೆಸರಿಸಲಾಗಿದೆ. ದೇಶ ವಿದೇಶಗಳ ಸುಮಾರು ಎರಡು ಸಾವಿರಕ್ಕೂ ಹೆಚ್ಚು ಮಹಿಳಾ ಉದ್ದಿಮೆದಾರರು ಈ ಸಮಾವೇಶದಲ್ಲಿ ಭಾಗವಹಿಸಲಿದ್ದಾರೆ ಎಂದು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ತುಮಕೂರು ರಸ್ತೆಯಲ್ಲಿರುವ ಅಂತರರಾಷ್ಟ್ರೀಯ ವಸ್ತು ಪ್ರದರ್ಶನ ಕೇಂದ್ರದಲ್ಲಿ ಈ ಸಮಾವೇಶ ನಡೆಯಲಿದ್ದು, ಸಮಾವೇಶದಲ್ಲಿ ಭಾಗವಹಿಸಲು ಈಗಾಗಲೇ ಸುಮಾರು 1700 ಮಹಿಳಾ ಉದ್ದಿಮೆದಾರರು ತಮ್ಮ ಹೆಸರುಗಳನ್ನು ನೋಂದಾಯಿಸಿಕೊಂಡಿದ್ದಾರೆ ಎಂದು ತಿಳಿಸಿದ ಅವರು ರಾಜ್ಯದ 667 ಮಹಿಳಾ ಉದ್ದಿಮೆದಾರರು ತಮ್ಮ ಹೆಸರು ನೋಂದಾಯಿಸಿದ್ದಾರೆ ಎಂದು ತಿಳಿಸಿದ್ದಾರೆ.

ರಾಜ್ಯದಲ್ಲಿನ ಪ್ರತಿ ಜಿಲ್ಲೆಯಲ್ಲಿರುವ ಮಹಿಳಾ ಉದ್ದಿಮೆದಾರರ ಉತ್ಪನ್ನಗಳನ್ನು ಮಾರಾಟ ಹಾಗೂ ಪ್ರದರ್ಶನಕ್ಕಾಗಿ ವಸ್ತು ಪ್ರದರ್ಶನ ಏರ್ಪಡಿಸಿದ್ದು, ಇತರೆ ಉದ್ಯಮಿದಾರರ ಜೊತೆಗೆ ಸಂವಾದ ನಡೆಸಲು ಅವಕಾಶ ಕಲ್ಪಿಸಿಕೊಡಲಾಗಿದೆ ಎಂದ ಕೈಗಾರಿಕಾ ಸಚಿವರು ರಾಜ್ಯದಲ್ಲಿರುವ 667 ಮಂದಿ ಎಲ್ಲಾ ಹಂತದ ಮಹಿಳಾ ಉದ್ದಿಮೆದಾರರ ಆರ್ಥಿಕ ಬೆಳವಣಿಗೆಗೆ ಪೂರಕವಾಗುವಂತೆ ಸಂವಾದ ಕಾರ್ಯಕ್ರಮವನ್ನು ಈ ಸಮಾವೇಶದಲ್ಲಿ ಆಯೋಜಿಸಲಾಗಿದೆ ಎಂದರು.

ಮಹಿಳಾ ಮಾಲೀಕತ್ವದ ಉದ್ದಿಮೆದಾರರ ಸಾಮರ್ಥ್ಯ ಮತ್ತು ಜಾಗತಿಕ ಮಾರುಕಟ್ಟೆ ಮೌಲ್ಯವನ್ನು ಹೆಚ್ಚಿಸುವ ಸಂಬಂಧ ಮಾಹಿತಿ ವಿನಿಮಯ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದ್ದು ಮಧ್ಯಸ್ಥಿಕೆದಾರರ ಸಹಭಾಗಿತ್ವದಲ್ಲಿ ಮಹಿಳಾ ಉದ್ದಿಮೆದಾರರ ಸಮುದಾಯವನ್ನು ಒಟ್ಟಿಗೆ ಕೊಂಡೊಯ್ಯುವುದು ಹಾಗೂ ಉದ್ದಿಮೆದಾರರ ಸಾಮರ್ಥ್ಯವನ್ನು ಹೆಚ್ಚಿಸುವುದು ಈ ಸಮಾವೇಶದ ಉದ್ದೇಶವಾಗಿದೆ ಎಂದ ಕೈಗಾರಿಕಾ ಸಚಿವರು ನವೆಂಬರ್ 14 ರಂದು ಈ ಮಹತ್ವದ ಸಮಾವೇಶವನ್ನು ರಾಜ್ಯದ ಮುಖ್ಯಮಂತ್ರಿ ಅವರು ಉದ್ಘಾಟಿಸಲಿದ್ದು, ರಾಷ್ಟ್ರ ಹಾಗೂ ಅಂತರರಾಷ್ಟ್ರಿಯ ಮಟ್ಟದ ಮಹಿಳಾ ಉದ್ದಿಮೆದಾರರು ಈ ಸಮಾವೇಶದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಬ್ರಿಟನ್ ದೇಶದ ಪ್ರಧಾನ ಮಂತ್ರಿಗಳು ನಾಳೆ ಬೆಂಗಳೂರಿಗೆ ಆಗಮಿಸುತ್ತಿದ್ದು ಕರ್ನಾಟಕ ಉದ್ಯಮ ಸ್ನೇಹಿ ಕೇಂದ್ರವಾಗಿರುವುದು ಸ್ವಾಗತಾರ್ಹ. ಬ್ರಿಟನ್ ಪ್ರದೇಶದ ಪ್ರಧಾನಿಗಳು ರಾಜ್ಯಕ್ಕೆ ಬರುತ್ತಿರುವುದು ಸಂತಸದ ವಿಷಯ ಎಂದು ಮಾತನಾಡಿದ ಸಚಿವರು ಭಾರತದ ಮಾಹಿತಿ ತಂತ್ರಜ್ಞಾನದ ಏಳಿಗೆಗೆ ಪೂರಕವಾಗಿ ವೀಸಾ ಸಮಸ್ಯೆ ಪರಿಹರಿಸುತ್ತಾರೆ ಎಂಬ ವಿಶ್ವಾಸವನ್ನು ಕೈಗಾರಿಕಾ ಸಚಿವ ಆರ್. ವಿ. ದೇಶಪಾಂಡೆ ಅವರು ವ್ಯಕ್ತಪಡಿಸಿದರು.

ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರತ್ನಪ್ರಭ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಡಿ.ವಿ. ಪ್ರಸಾದ್, ಆಯುಕ್ತರಾದ ಗೌರವ್ ಗುಪ್ತ ಅವರು ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

ಎಸ್‌ಎಂ:ಜೆಡಿ:ಜಿಪಿಆರ್.

# ಉಪಶಾಮಕ ಆರೈಕೆ ನೀತಿ ಕಾರ್ಯಸೂಚಿ ಬಿಡುಗಡೆ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಕಿದ್ವಾಯಿ ಕ್ಯಾನ್ಸರ್ ಸಂಸ್ಥೆ ಕರ್ನಾಟಕ ರಾಜ್ಯ ಸರ್ಕಾರದ ಉಪಶಾಮಕ ಆರೈಕೆ ನೀತಿಯ ಕಾರ್ಯಸೂಚಿ ದಸ್ತಾವೇಜ್‌ನ್ನು ನವೆಂಬರ್ 8 ರಂದು ಸಂಜೆ 7-00 ಗಂಟೆಗೆ ಲಾ ಮೆರಿಡಿಯನ್ ಹೋಟೆಲ್‌ನಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಕೆ.ಆರ್. ರಮೇಶ್‌ಕುಮಾರ್ ಬಿಡುಗಡೆ ಮಾಡಲಿದ್ದಾರೆ.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಉಪಶಾಮಕ ಆರೈಕೆ ವೈದ್ಯಕೀಯ ಔಷಧಿ, ಆಕ್ಸ್‌ಫರ್ಡ್ ವಿಶ್ವವಿದ್ಯಾಲಯ, ಯು.ಕೆ. ಅವರು ಭಾಗವಹಿಸಲಿದ್ದಾರೆ.

ಕಿದ್ವಾಯಿ ಕ್ಯಾನ್ಸರ್ ಸಂಸ್ಥೆಯ ಉಪಶಾಮಕ ಆರೈಕೆ ವಾರ್ತಾ ಪತ್ರಿಕೆ ಬಿಡುಗಡೆಯನ್ನು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಆರ್. ಪಾಟೀಲ್ ಅವರು ನೆರವೇರಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

ಕಿದ್ವಾಯಿ ಕ್ಯಾನ್ಸರ್ ಸಂಸ್ಥೆ ನಿರ್ದೇಶಕ ಡಾ. ಕೆ.ಬಿ. ಲಿಂಗೇಗೌಡ ಹಾಗೂ ಬೆಂಗಳೂರು ಅನ್ಕಾಲಜಿ ಗ್ರೂಪ್ ಅಧ್ಯಕ್ಷ ಡಾ. ಪಿ.ಪಿ. ಬ್ಯಾಪ್ಸಿ ಅವರು ಸಮಾರಂಭದಲ್ಲಿ ಉಪಸ್ಥಿತರಿರುವರು.

ಎಸ್‌ಎಂ:ಜೆಡಿ:ಜಿಪಿಆರ್.

# ಟಿಪ್ಪು ಜಯಂತಿ ನವೆಂಬರ್ 10

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಟಿಪ್ಪು ಜಯಂತಿ ಕಾರ್ಯಕ್ರಮವನ್ನು ನವೆಂಬರ್ 10 ರಂದು ಬೆಳಿಗ್ಗೆ 11.00 ವಿಧಾನಸೌಧ ಬ್ಯಾಂಕ್ವೆಟ್ ಹಾಲ್‌ನಲ್ಲಿ ಏರ್ಪಡಿಸಿದೆ.**

**ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ನಗರಾಭಿವೃದ್ಧಿ ಹಾಗೂ ಹಜ್ ಸಚಿವ ಆರ್. ರೋಷನ್ ಬೇಗ್ ಅವರು ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ.**

**ಸಮಾರಂಭದಲ್ಲಿ ವಿಧಾನ ಪರಿಷತ್ತಿನ ಸಭಾಪತಿ ಡಿ.ಹೆಚ್. ಶಂಕರಮೂರ್ತಿ ಹಾಗೂ ವಿಧಾನಸಭೆಯ ಸಭಾಧ್ಯಕ್ಷ ಕೆ.ಬಿ. ಕೋಳಿವಾಡ ಅವರು ಸೇರಿದಂತೆ ಹಲವು ಗಣ್ಯರು ಹಾಗೂ ಸಚಿವ ಸಂಪುಟ ಸದಸ್ಯರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.**

**ಮೈಸೂರು ಪತ್ರಕರ್ತ ಟಿ. ಗುರುರಾಜ್ ಅವರು ಟಿಪ್ಪು ಕುರಿತು ವಿಶೇಷ ಉಪನ್ಯಾಸ ನೀಡಲಿದ್ದಾರೆ. ವಿಶೇಷ ಆಹ್ವಾನಿತರಾಗಿ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಮಿತಿ ಅಧ್ಯಕ್ಷ ಜೆ.ಆರ್. ಲೋಬೋ, ಕರ್ನಾಟಕ ಬ್ಯಾರಿ ಸಾಹಿತ್ಯ ಅಕಾಡೆಮಿ, ಉರ್ದು ಸಾಹಿತ್ಯ ಅಕಾಡೆಮಿ, ಅಲ್ಪಸಂಖ್ಯಾತರ ಆಯೋಗ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಅಧ್ಯಕ್ಷರುಗಳು ಭಾಗವಹಿಸಲಿದ್ದಾರೆ.**

ಎಸ್‌ಎಂ:ಜೆಡಿ:ಜಿಪಿಆರ್.

# ಕೋರಮಂಗಲದಲ್ಲಿ ಸಾರಿಗೆ ಅದಾಲತ್

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

**ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು ಕೇಂದ್ರವು ಸಾರ್ವಜನಿಕರ ಕುಂದು ಕೊರತೆ ಹಾಗೂ ಸಲಹೆಗಳನ್ನು ಪಡೆಯುವ ಸಲುವಾಗಿ ನವೆಂಬರ್ 8 ರಂದು ಮಧ್ಯಾಹ್ನ 3-00 ಗಂಟೆಗೆ ಉಪ ಸಾರಿಗೆ ಆಯುಕ್ತರು ಮತ್ತು ಹಿರಿಯ ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಚೇರಿ, ಬೆಂಗಳೂರು (ಕೇಂದ್ರ) 2 ನೇ ಮಹಡಿ, ಬಿ.ಡಿ.ಎ. ವಾಣಿಜ್ಯ ಸಂಕೀರ್ಣ, ಕೋರಮಂಗಲ, ಬೆಂಗಳೂರು ಇಲ್ಲಿ ಸಾರಿಗೆ ಅದಾಲತ್‌ನ್ನು ಹಮ್ಮಿಕೊಂಡಿದೆ.**

**ಈ ಅದಾಲತ್‌ನಲ್ಲಿ ಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದು, ಸಾರ್ವಜನಿಕರ ಕುಂದುಕೊರತೆಗಳನ್ನು ಆಲಿಸಿ, ಸೂಕ್ತ ಪರಿಹಾರವನ್ನು ನೀಡುವರು. ಈ ವ್ಯಾಪ್ತಿಯ ಸಾರ್ವಜನಿಕರು ಈ ಸಾರಿಗೆ ಅದಾಲತ್‌ನ್ ಪ್ರಯೋಜನವನ್ನು ಪಡೆಯಬಹುದಾಗಿದೆ.**

ಎಸ್‌ಎಂ:ಜೆಡಿ:ಜಿಪಿಆರ್.

# <u>ಅರ್ಜಿ ಆಹ್ವಾನ</u>

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಸಮಗ್ರ ಶಿಶುಅಭಿವೃದ್ಧಿ ಯೋಜನೆ, ಬೆಂಗಳೂರು(ರಾಜ್ಯ) ಯೋಜನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ನಗರ ಜಿಲ್ಲೆ ವ್ಯಾಪ್ತಿಯಲ್ಲಿರುವ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 53 ಅಂಗನವಾಡಿ ಕಾರ್ಯಕರ್ತೆ ಹಾಗೂ 75 ಅಂಗನವಾಡಿ ಸಹಾಯಕಿಯರ ಹುದ್ದೆಗೆ ದಿನಾಂಕ: 5-11-2016 ರಂದು ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 29-11-2016 ರಂದು ಕೊನೆಯ ದಿನವಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಬೆಂಗಳೂರು(ರಾಜ್ಯ) ಯೋಜನೆ, ಒಂದನೇ ಮಹಡಿ, ಬಿ.ಬಿ.ಎಂ.ಪಿ. ಬೆಂಗಳೂರು ಒನ್ ಕಟ್ಟಡ, ಹೆರಿಗೆ ಆಸ್ಪತ್ರೆ ಪಕ್ಕ, ಎನ್.ಆರ್. ಕಾಲೋನಿ, ಬೆಂಗಳೂರು -560 019 ದೂರವಾಣಿ: 26601917 ಇವರನ್ನು ಸಂಪರ್ಕಿಸಬಹುದಾಗಿದೆ.

## ಅಧಿಕಾರ ಸ್ವೀಕಾರ

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

ಶ್ರೀಮತಿ ಭಾರತಿ ಶಂಕರ್, ಅವರು ಕರ್ನಾಟಕ ರಾಜ್ಯ ಮಹಿಳಾ ಅಭಿವೃದ್ಧಿ ನಿಗಮದ ಅಧ್ಯಕ್ಷರ ಹುದ್ದೆಯನ್ನು ವಹಿಸಿಕೊಂಡಿದ್ದಾರೆ.

## <u>ಅಧಿಕಾರ ಸ್ವೀಕಾರ</u>

ಬೆಂಗಳೂರು, ನವೆಂಬರ್ 7 (ಕರ್ನಾಟಕ ವಾರ್ತೆ)

**ಜೆ. ಹುಚ್ಚಪ್ಪ ಅವರು ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಇತ್ತೀಚೆಗೆ ಅಧಿಕಾರ ವಹಿಸಿಕೊಂಡಿದ್ದಾರೆ.**

:ಜೆಡಿ:ಜಿಪಿಆರ್.